# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 542 |
| ಸದಸ್ಯರ ಹೆಸರು | | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 19.07.2024. |
| ಉತ್ತರಿಸುವವರು | | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಭಾರತ ಸಂವಿಧಾನ 73ನೇ ತಿದ್ದುಪಡಿ ಪ್ರಕಾರ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣೆಯನ್ನು ನಿಯತಕಾಲಿಕವಾಗಿ ಜರುಗಿಸಬೇಕಾಗಿರುವುದು ರಾಜ್ಯ ಸರ್ಕಾರದ ಜವಬ್ದಾರಿಯಲ್ಲವೇ; | ಹೌದು. |
| (ಆ) | ಹಾಗಿದ್ದಲ್ಲಿ, ಕಳೆದ 4 ವರ್ಷಗಳಿಂದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣೆಯನ್ನು ನಡೆಸದೆ ನೆನೆಗುದಿಗೆ ಬಿದ್ದಿರಲು ಕಾರಣವೇನು (ಪೂರ್ಣ ಮಾಹಿತಿ ನೀಡುವುದು); | ಕಳೆದ ನಾಲ್ಕು ವರ್ಷದ ಅವಧಿಯಲ್ಲಿ, ರಾಜ್ಯದಲ್ಲಿ ಹೊಸದಾಗಿ 63 ತಾಲ್ಲೂಕುಗಳು ರಚನೆಯಾಗಿರುತ್ತವೆ ಹಾಗೂ ಹೊಸದಾಗಿ ಒಂದು ಜಿಲ್ಲಾ ಪಂಚಾಯಿತಿ ರಚನೆಯಾಗಿರುತ್ತದೆ ಹಾಗೂ 71 ಗ್ರಾಮ ಪಂಚಾಯಿತಿಗಳು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಗೊಂಡಿರುವು ಹಾಗೂ ಕೆಲವೊಂದು ತಾಲ್ಲೂಕುಗಳ ಹಾಗೂ ಜಿಲ್ಲೆಗಳ ಮತ್ತು ಗ್ರಾಮ ಪಂಚಾಯಿತಿಗಳ ಭೂ ಪ್ರದೇಶ ವ್ಯಾಪ್ತಿ ಮತ್ತು ಜನ ಸಂಖ್ಯೆಯಲ್ಲಿ ಹೆಚ್ಚಿನ ಬದಲಾವಣೆಯಾಗಿರುತ್ತದೆ. ಈ ಎಲ್ಲಾ ಕಾರಣಗಳಿಂದ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಚುನಾವಣಾ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬದಲಾವಣೆಗಳಾಗಿರುತ್ತವೆ.<br><br>ಈ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳ ಚುನಾವಣಾ ಕ್ಷೇತ್ರಗಳನ್ನು ವಿಂಗಡಿಸಿ ಅವುಗಳ ಸೀಮಾ/ಗಡಿಯನ್ನು ನಿರ್ಣಯಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 308-ಇ ರಂತೆ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದ್ದು, ಆಯೋಗದ ಶಿಫಾರಸ್ಸಿನಂತೆ ರಾಜ್ಯ ಸರ್ಕಾರ ಚುನಾವಣಾ ಕ್ಷೇತ್ರಗಳನ್ನು ನಿಯಮಾನುಸಾರ ಪುನರ್ ರಚಿಸಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಪ್ರಸ್ತುತ ಈ ಎಲ್ಲಾ ಕ್ಷೇತ್ರಗಳಿಗೆ ನಿಯಮಾನುಸಾರ ಮೀಸಲಾತಿಯನ್ನು ನಿಗದಿಗೊಳಿಸಿ ಕರಡು ಅಧಿಸೂಚನೆಯನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲು ಸರ್ಕಾರದ ಹಂತದಲ್ಲಿ ಕ್ರಮ ವಹಿಸಲಾಗುತ್ತಿದೆ. ಈ ಕಾರಣಗಳಿಂದ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಚುನಾವಣೆಯನ್ನು ನಡೆಸಲು ಸಾಧ್ಯವಾಗಿರುವುದಿಲ್ಲ. |
| (ಇ) | ರಾಜ್ಯ ಸರ್ಕಾರ ಕರ್ನಾಟಕ ಹೈಕೋರ್ಟ್‌ನಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ನಿಗಧಿತ ಅವಧಿಯಲ್ಲಿ ನಡೆಸುವುದಾಗಿ ಮುಚ್ಚಳಿಕೆ ಬರೆದುಕೊಟ್ಟು, ಹೈಕೋರ್ಟ್‌ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಾಕಿಯಿದ್ದ ರಿಟ್ ಅರ್ಜಿ ತೀರುವಳಿಯಾಗಿರುವುದು ನಿಜವೇ; ಹಾಗಿದ್ದಲ್ಲಿ, ಸರ್ಕಾರ ನೀಡಿರುವ ಮುಚ್ಚಳಿಕೆಯಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಜರುಗಿಸಲು ಸರ್ಕಾರಕ್ಕೆ ಇರುವ ಸಮಸ್ಯೆಗಳು ಯಾವುದು; (ಪೂರ್ಣ ಮಾಹಿತಿ ನೀಡುವುದು) | |

| | | |
|---|---|---|
| (ಈ) | ಕರ್ನಾಟಕ ಚುನಾವಣಾ ಆಯೋಗ ಕರ್ನಾಟಕ ಹೈಕೋರ್ಟ್‌ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದ ಹಿನ್ನೆಲೆಯಲ್ಲಿ, ಕರ್ನಾಟಕ ಚುನಾವಣಾ ಆಯೋಗವನ್ನು ರದ್ದುಪಡಿಸಿ, ಚುನಾವಣಾ ಕಾರ್ಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ವಹಿಸಲು ನಿರ್ಧರಿಸುವುದು ನಿಜವೇ; (ವಾಸ್ತವಾಂಶ ಒಳಗೊಂಡ ಪೂರ್ಣ ಮಾಹಿತಿ ನೀಡುವುದು) | ರಾಜ್ಯ ಚುನಾವಣಾ ಆಯೋಗವು ಸಂವಿಧಾನಾತ್ಮಕ ಸಂಸ್ಥೆಯಾಗಿದ್ದು, ಅದನ್ನು ರಾಜ್ಯ ಸರ್ಕಾರ ರದ್ದುಪಡಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.<br><br>ಪಂಚಾಯತ್ ರಾಜ್ ಚುನಾವಣಾ ಕ್ಷೇತ್ರಗಳ ಮೀಸಲಾತಿಗೆ ಹಿಂದುಳಿದ ವರ್ಗಗಳ ಅರ್ಹ ಜಾತಿಗಳನ್ನು ಗುರುತಿಸಲು ರಾಜ್ಯ ಸರ್ಕಾರ ರಚಿಸಲಾಗಿದ್ದ ಡಾ: ನ್ಯಾಯಮೂರ್ತಿ ಕೆ. ಭಕ್ತವತ್ಸಲ ರವರ ಆಯೋಗವು ರಾಜ್ಯ ಚುನಾವಣಾ ಆಯೋಗಕ್ಕೆ ಸಂಬಂಧಿಸಿದಂತೆ ಸಚಿವಾಲಯದಲ್ಲಿ ನಿರ್ವಹಿಸಬೇಕಾಗಿರುವ ಆಡಳಿತಾತ್ಮಕ ವಿಷಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವಾಲಯದಿಂದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖಾ ಸಚಿವಾಲಯಕ್ಕೆ ವರ್ಗಾಯಿಸುವುದು ಸೂಕ್ತವೆಂದು ಅಭಿಪ್ರಾಯಿಸಿ ಸರ್ಕಾರಕ್ಕೆ ವರದಿ ಸಲ್ಲಿಸಿತ್ತು. ಈ ಶಿಫಾರಸ್ಸನ್ನು ಸರ್ಕಾರದ ಇತ್ತೀಚಿನ ನಿರ್ಣಯದಂತೆ ತಿರಸ್ಕರಿಸಲಾಗಿದೆ. ರಾಜ್ಯ ಚುನಾವಣಾ ಆಯೋಗವು ಸರ್ಕಾರದ ವಿರುದ್ಧ ಸಲ್ಲಿಸಿರುವ ನ್ಯಾಯಾಲಯ ನಿಂದನಾ ಅರ್ಜಿಗೂ, ಡಾ: ನ್ಯಾಯಮೂರ್ತಿ ಕೆ ಭಕ್ತವತ್ಸಲ ರವರ ಆಯೋಗದ ವರದಿಗೂ ಸಂಬಂಧವಿರುವುದಿಲ್ಲ. |
| (ಉ) | ರಾಜ್ಯ ಸರ್ಕಾರಕ್ಕೆ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಇಚ್ಛಾಶಕ್ತಿ ಇದೆಯೇ; ಇದ್ದಲ್ಲಿ, ಸಂವಿಧಾನದ ಆಶಯದಂತೆ ಚುನಾವಣೆಗಳನ್ನು ಯಾವಾಗ ನಡೆಸಲಾಗುವುದು? (ಪೂರ್ಣ ಮಾಹಿತಿ ನೀಡುವುದು) | ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳ ಚುನಾವಣೆಯನ್ನು ಆದಷ್ಟು ಬೇಗ ನಡೆಸಲು ಸರ್ಕಾರ ನಿರ್ಧರಿಸಿರುತ್ತದೆ. ಚುನಾವಣಾ ಕ್ಷೇತ್ರಗಳ ಮೀಸಲಾತಿಯ ಕರಡು ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಅಧಿಸೂಚಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಎಲ್ಲಾ ಪ್ರಕ್ರಿಯೆಗಳು ಅಂತಿಮಗೊಂಡ ನಂತರ ಚುನಾವಣೆಯನ್ನು ನಡೆಸುವಂತೆ ರಾಜ್ಯ ಚುನಾವಣ ಆಯೋಗಕ್ಕೆ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು. |

ಸಂಖ್ಯೆ: ಗ್ರಾಅಪ 312 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು